ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	45
ಸದಸ್ಯರ ಹೆಸರು	[illegible] (ನಾಮನಿರ್ದೇಶನ ಹೊಂದಿದವರು)
ಉತ್ತರಿಸಬೇಕಾದ ದಿನಾಂಕ	02-03-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕರೋನಾ ವೈರಸ್ ತಡೆಗಟ್ಟಲು ಆರೋಗ್ಯ ಇಲಾಖೆ ಕೈಗೊಂಡಿರುವ ಕ್ರಮಗಳೇನು;</td><td>ಕರೋನಾ ವೈರಸ್ ತಡೆಗಟ್ಟಲು ಆರೋಗ್ಯ ಇಲಾಖೆ ಕೈಗೊಂಡಿರುವ ಕ್ರಮಗಳನ್ನು ಅನುಬಂಧದಲ್ಲಿ ನೀಡಲಾಗಿದೆ.</td></tr>
<tr><td>ಆ</td><td>ಕರೋನಾ ರೋಗ ಕರ್ನಾಟಕ ರಾಜ್ಯದಲ್ಲಿ ಪತ್ತೆಯಾಗಿದೆಯೇ; ಇದಕ್ಕೆ ಯಾವ ಔಷಧಿಯನ್ನು ನೀಡಲಾಗುವುದು;</td><td>ಕರೋನಾ ವೈರಸ್ ಪ್ರಕರಣಗಳು ರಾಜ್ಯದಲ್ಲಿ ಪತ್ತೆಯಾಗಿರುವುದಿಲ್ಲ. ಈ ವೈರಸ್ ಸೋಂಕಿಗೆ ಯಾವುದೇ ಔಷಧಿ ಲಭ್ಯವಿಲ್ಲ.</td></tr>
<tr><td>ಇ</td><td>ರಾಜ್ಯದಲ್ಲಿ ವೈರಸ್‌ಗಳು ಹರಡುವುದನ್ನು ತಡೆಯಲು ವಿದೇಶದಿಂದ ಆಗಮಿಸುವ ಜನರ ಮೇಲೆ ನಿಯಂತ್ರಣ ಹಾಕಲಾಗಿದೆಯೇ;</td><td>ವಿದೇಶದಿಂದ ಆಗಮಿಸುವ ಜನರ ಮೇಲೆ ಯಾವುದೇ ನಿಯಂತ್ರಣ ಹಾಕಲಾಗಿಲ್ಲ. ಆದರೆ, ಕೊರೊನಾ ಬಾಧಿತ ದೇಶಗಳಿಂದ ಬರುವ ಜನರನ್ನು ವಿಮಾನ ನಿಲ್ದಾಣದಲ್ಲಿಯೇ ತಪಾಸಣೆಗೆ ಒಳಪಡಿಸಲಾಗಿದೆ. ಇಲ್ಲಿಯವರೆಗೆ ಒಟ್ಟು 10 ರಾಷ್ಟ್ರಗಳಿಂದ ಬಂದಿರುವ 34,490 ಪ್ರಯಾಣಿಕರನ್ನು ತಪಾಸಣೆ ನಡೆಸಲಾಗಿದೆ.</td></tr>
<tr><td>ಈ</td><td>ಈ ರೋಗ ಯಾವ ಮೂಲಗಳಿಂದ ಹರಡುತ್ತದೆ; (ವಿವರ ನೀಡುವುದು)</td><td>ಇದು ವೈರಸ್ ಸೋಂಕಿತ ವ್ಯಕ್ತಿಯಿಂದ ಮತ್ತೊಬ್ಬರಿಗೆ [illegible] ಹರಡುತ್ತದೆ.</td></tr>
<tr><td>ಉ</td><td>2018-19, 2019-20ನೇ ಸಾಲಿನಲ್ಲಿ ರಾಜ್ಯದಲ್ಲಿ ವಿವಿಧ ವೈರಸ್‌ಗಳ ಹರಡುವಿಕೆಯಿಂದ ಸಾವನ್ನಪ್ಪಿದವರ ಸಂಖ್ಯೆ ಎಷ್ಟು ಪರಿಹಾರ ನೀಡಲಾಗಿದೆಯೇ; (ವಿವರ ನೀಡುವುದು)</td><td>
<table>
<tr><th colspan="4">2018-19 ಮತ್ತು 2019-20 ನೇ ಸಾಲಿನಲ್ಲಿ ವಿವಿಧ ವೈರಸ್‌ಗಳಿಂದ ಸಂಭವಿಸಿದ ಮರಣಗಳು</th></tr>
<tr><th>ಕ್ರಮ ಸಂ</th><th>ವೈರಸ್ ಕಾಯಿಲೆಗಳು</th><th>2018 ಮರಣಗಳು</th><th>2019 ಮರಣಗಳು</th></tr>
<tr><td>1</td><td>ಹೆಚ್1ಎನ್1</td><td>87</td><td>96</td></tr>
<tr><td>2</td><td>ಕೆ.ಎಫ್.ಡಿ</td><td>0</td><td>15</td></tr>
<tr><td></td><td>ಒಟ್ಟು</td><td>87</td><td>111</td></tr>
</table>
ಯಾವುದೇ, ಸಾಂಕ್ರಾಮಿಕ ರೋಗದಿಂದ ಸಾವನ್ನಪ್ಪಿದವರಿಗೆ ಪರಿಹಾರ ನೀಡುವ ಅವಕಾಶ ಸರ್ಕಾರದಲ್ಲಿರುವುದಿಲ್ಲ. ಆದರೆ, ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ಎಲ್ಲಾ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ.</td></tr>
</table>

[illegible] 1 [illegible] 2020

(ಬಿ.ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಅನುಬಂಧ-1

ನಾವೆಲ್ ಕೊರೋನ ವೈರಸ್ ತಡೆಗಟ್ಟಲು ಕೈಗೊಳ್ಳಲಾಗಿರುವ ಕ್ರಮಗಳು:-

- ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಎಲ್ಲಾ ಅಧಿಕಾರಿಗಳ ಉನ್ನತ ಮಟ್ಟದ ಸಭೆ ಕರೆದು ತೆಗೆದುಕೊಳ್ಳಬಹುದಾದ ಎಲ್ಲಾ ಕಾರ್ಯಗಳ ಬಗ್ಗೆ ಚರ್ಚಿಸಲಾಗಿದೆ.
- ಎಲ್ಲಾ ಜಿಲ್ಲಾಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಸಭೆ ಕರೆದು ನೋವೆಲ್ ಕೊರೋನ ವೈರಸ್ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಅಗತ್ಯ ಎಲ್ಲಾ ಮಾಹಿತಿಗಳನ್ನು ನೀಡಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದ್ದು, ಉಸ್ತುವಾರಿ ಮತ್ತು ಮೇಲ್ವಿಚಾರಣೆ ನಡೆಸುತ್ತಿದ್ದಾರೆ.
- ರಾಜ್ಯದಿಂದ ನಾವೆಲ್ ಕೊರೋನ ವೈರಸ್ ನಿಯಂತ್ರಣ ಮತ್ತು ತಡೆಗಟ್ಟುವಿಕೆಯ ಕ್ರಮಗಳನ್ನು ಅನುಸರಿಸಲು ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಮಾರ್ಗದರ್ಶಿ ಸುತ್ತೋಲೆ ಹೊರಡಿಸಲಾಗಿದೆ.
- ಎಲ್ಲಾ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು ಮತ್ತು ಎಪಿಡಾಮಲಾಜಿಸ್ಟ್ ಅಧಿಕಾರಿಗಳಿಗೆ 4 ಭಾರಿ ವೀಡಿಯೋ ಕಾನ್ಫರೆನ್ಸ್ ಮೂಲಕ ಅಗತ್ಯ ಎಲ್ಲಾ ಮಾಹಿತಿಗಳನ್ನು ನೀಡಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ.
- ರಾಜ್ಯದ ಬಂದರು ಮತ್ತು ವಿಮಾನ ನಿಲ್ದಾಣಗಳಲ್ಲಿ ವೈದ್ಯಾಧಿಕಾರಿಗಳು ಮತ್ತು ಅರೆವೈದ್ಯಕೀಯ ಸಿಬ್ಬಂದಿಗಳನ್ನು ನಿಯೋಜಿಸಲಾಗಿದ್ದು, ಪ್ರಯಾಣಿಕರಿಗೆ ನಿರಂತರವಾಗಿ ತಪಾಸಣೆಗಳನ್ನು ನಡೆಸಲಾಗುತ್ತಿದೆ.
- ಕೆಂಪೇಗೌಡ ಅಂತರ ರಾಷ್ಟ್ರಿಯ ವಿಮಾನ ನಿಲ್ದಾಣದಲ್ಲಿ 108 ಅಂಬುಲೆನ್ಸ್ ವಾಹನವನ್ನು 24x7 ರ ಸಮಯಕ್ಕೆ ನಿಯೋಜಿಸಿ ಸಂಶಯಾಸ್ಪದ ಪ್ರಯಾಣಿಕರನ್ನು ಕೂಡಲೇ ರಾಜೀವ್ ಗಾಂಧಿ ಎದೆರೋಗಗಳ ಎಸ್.ಡಿ.ಎಸ್. ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆಗೆ ರವಾನಿಸಿ ಕೂಡಲೇ ಚಿಕಿತ್ಸೆಗೆ ಒಳಪಡಿಸಿ ಪರೀಕ್ಷಿಸಲಾಗುತ್ತಿದೆ.
- ರಾಜ್ಯದಲ್ಲಿ ಕೊರೋನಾ ವೈರಸ್ ಶಂಕಿತರನ್ನು ಗುರುತಿಸಲು ಮತ್ತು ಸಂಶಯಾಸ್ಪದ ಪ್ರಯಾಣಿಕರಿಗೆ ಚಿಕಿತ್ಸೆ ನೀಡಲು ರಾಜ್ಯದಲ್ಲಿ ಒಟ್ಟು 50 ಆಸ್ಪತ್ರೆಗಳನ್ನು ಗುರುತಿಸಲಾಗಿದೆ. ಈ ಎಲ್ಲಾ 50 ಆಸ್ಪತ್ರೆಗಲ್ಲಿ ವೆಂಟಿಲೇಟರ್ ಸೌಲಭ್ಯ ಇರುತ್ತದೆ.
- ಬೆಂಗಳೂರಿನಲ್ಲಿ ರಾಜೀವ್ ಗಾಂಧಿ ಎದೆರೋಗಗಳ ಎಸ್.ಡಿ.ಎಸ್. ಕ್ಷಯ ರೋಗ ಸಂಶೋಧನಾ ಕೇಂದ್ರ ಮತ್ತು ರಾಜೀವ್ ಗಾಂಧಿ ಎದೆ ರೋಗಗಳ ಸಂಸ್ಥೆ, ಸಾರ್ವಜನಿಕ ಆಸ್ಪತ್ರೆ ಜಯನಗರ ಮತ್ತು ಸಾಂಕ್ರಾಮಿಕ ರೋಗಗಳ ಆಸ್ಪತ್ರೆ, ಇಂದಿರಾನಗರ ಇಲ್ಲಿ ವಿಶೇಷ ವಾರ್ಡನ್ನು ತೆರೆಯಲಾಗಿದೆ.
- ಬೆಂಗಳೂರಿನ ಪ್ರತಿಷ್ಠಿತ 19 ಖಾಸಗಿ ಆಸ್ಪತ್ರೆಗಳಲ್ಲಿ ವಿಶೇಷ ವಾರ್ಡನ್ನು ತೆರೆಯಲಾಗಿದ್ದು, ಎಲ್ಲಾ ಖಾಸಗಿ ಆಸ್ಪತ್ರೆಯ ಮುಖ್ಯಸ್ಥರಿಗೆ ಅಗತ್ಯ ಸಲಹೆ ಸೂಚನೆ ಮತ್ತು ಮಾರ್ಗಸೂಚಿಗಳನ್ನು ನೀಡಲಾಗಿದೆ.
- ರಾಜ್ಯದಲ್ಲಿ 1642 ಎನ್-95 ಮಾಸ್ಕ್ ಮತ್ತು 76 ಪಿ.ಪಿ.ಇ ಸಲಕರಣೆಗಳನ್ನು ವಿತರಿಸಲಾಗಿದ್ದು, ಆರೋಗ್ಯ ಸಂಸ್ಥೆಗಳಲ್ಲಿ ಅಗತ್ಯ ಔಷಧಿ ಮತ್ತು ಸಲಕರಣೆಗಳ ದಾಸ್ತಾನು ಲಭ್ಯವಿದೆ.
- ಸಂಶಯಾಸ್ಪದ ಪ್ರಯಾಣಿಕರ ತಪಾಸಣೆ ಮತ್ತು ಚಿಕಿತ್ಸೆ ನಿರ್ವಹಿಸುವ ವೈದ್ಯಾಧಿಕಾರಿಗಳಿಗೆ ಮತ್ತು ಅರೆವೈದ್ಯಕೀಯ ಸಿಬ್ಬಂದಿಗಳಿಗೆ ಸೂಕ್ತ ತರಭೇತಿ ನೀಡಲಾಗಿದೆ.
- ತುರ್ತು ಸಂದರ್ಭದಲ್ಲಿ ಸಂಶಯಾಸ್ಪದ ಪ್ರಯಾಣಿಕರಿಗೆ ಚಿಕಿತ್ಸೆ ನೀಡಲು ಅಗತ್ಯವಿರುವ ಔಷಧಿಗಳು ಎಲ್ಲಾ ಆರೋಗ್ಯ ಸಂಸ್ಥೆಗಳಲ್ಲಿ ದಾಸ್ತಾನು ಇದ್ದು, ಅಗತ್ಯವಿದ್ದಲ್ಲಿ ಖರೀದಿಸಲು ರಾಷ್ಟ್ರೀಯ ಆರೋಗ್ಯ ಅಭಿಯಾನದಿಂದ ಅನುದಾನ ಬಿಡುಗಡೆ ಮಾಡಲಾಗಿದೆ.
- ಕನ್ನಡ ಮತ್ತು ಇಂಗ್ಲಿಷ್‌ನಲ್ಲಿ ನಾವೆಲ್ ಕೊರೋನ ವೈರಸ್‌ನ ಬಗ್ಗೆ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗಿದೆ. ದೂರದರ್ಶನ ಮತ್ತು ರೇಡಿಯೋಗಳಲ್ಲಿ ಮುಂಜಾಗ್ರತಾ ಕ್ರಮಗಳ ಬಗ್ಗೆ ಪ್ರಚಾರ ಮಾಡಲಾಗಿದೆ.
- '104' "ಆರೋಗ್ಯ ಸಹಾಯವಾಣಿ' ಮುಖೇನವು ಈ ವಿಷಯವಾಗಿ ಮಾಹಿತಿ ಒದಗಿಸಲಾಗುತ್ತಿದೆ.
- ಆರೋಗ್ಯ ಇಲಾಖೆಯಿಂದ ತೆಗೆದುಕೊಂಡಿರುವ ಎಲ್ಲಾ ಅಗತ್ಯ ಕ್ರಮಗಳು, ತಪಾಸಣಾ ವಿವರಗಳನ್ನು ಪ್ರತಿದಿನ ದೈನಂದಿನ "ಮೀಡಿಯ ಬುಲೆಟಿನ್" ನಲ್ಲಿ ನೀಡಲಾಗುತ್ತಿದೆ.
- ಜನಸಂದಣಿ ಹೆಚ್ಚಿರುವ ಧಾರ್ಮಿಕ ಸ್ಥಳಗಳು ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಸದರಿ ರೋಗದ ಲಕ್ಷಣ ಮತ್ತು ನಿಯಂತ್ರಣ ಕ್ರಮಗಳ ಬಗ್ಗೆ ಕರಪತ್ರಗಳನ್ನು ಹಂಚಲಾಗಿದೆ ಹಾಗೂ ಸೂಚನಾ ಫಲಕಗಳನ್ನು ಪ್ರದರ್ಶಿಸಲಾಗಿದೆ. ಅಲ್ಲದೆ, ಸದರಿ ಸ್ಥಳಗಳಲ್ಲಿ ವೈದ್ಯಕಿಯ ಹಾಗೂ ಅರೆವೈದ್ಯಕೀಯ ಸಿಬ್ಬಂದಿಯೊಂದಿಗೆ ಮೆಡಿಕಲ್ ಚೆಕ್‌ಪೋಸ್ಟ್ ತೆರೆಯಲು ಸೂಚಿಸಲಾಗಿದೆ.